ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ದೇವಾಲಯದ ಹುಂಡಿಯಲ್ಲಿ ಸಂಗ್ರಹವಾಗುವ ದೇಣಿಗೆ ಬಗ್ಗೆ

ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

364 (373) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2017-18ನೇ ಸಾಲಿನಿಂದ ಇಲ್ಲಿಯವರೆವಿಗೆ ರಾಜ್ಯದ ಮುಜರಾಯಿ ದೇವಾಲಯಗಳಲ್ಲಿ ಹುಂಡಿ ದೇಣಿಗೆ ರೂಪದಲ್ಲಿ ಸಂಗ್ರಹವಾದ ಆದಾಯವೆಷ್ಟು ;

(ಆ) ಸದರಿ ಮೊತ್ತವನ್ನು ಯಾವ ಯಾವ ಉದ್ದೇಶಗಳಿಗೆ ವಿನಿಯೋಗಿಸಲಾಗಿದೆ ; (ವಿವರ ನೀಡುವುದು)

(ಇ) 2017-18ನೇ ಸಾಲಿನಿಂದ ಇಲ್ಲಿಯವರೆವಿಗೆ ಖಾಸಗಿ ದೇವಾಲಯಗಳ ಜೀರ್ಣೋದ್ಧಾರ ಕಾಮಗಾರಿಗಾಗಿ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ;

(ಈ) 2017-18ನೇ ಸಾಲಿನಿಂದ ಇಲ್ಲಿಯವರೆವಿಗೂ ಕೈಗೊಂಡ ಜೀರ್ಣೋದ್ಧಾರ ಕಾಮಗಾರಿಗಳ ಸಂಖ್ಯೆ ಎಷ್ಟು ; ಅವು ಯಾವುವು; ಇವುಗಳಲ್ಲಿ ಪೂರ್ಣಗೊಂಡ ಕಾಮಗಾರಿಗಳ ಸಂಖ್ಯೆ ಎಷ್ಟು ; ಬಾಕಿ ಉಳಿದ ಕಾಮಗಾರಿಗಳ ಸಂಖ್ಯೆ ಎಷ್ಟು ;

(ಉ) 2017-18ನೇ ಸಾಲಿನಿಂದ ಇಲ್ಲಿಯವರೆವಿಗೆ ರಾಜ್ಯದಲ್ಲಿನ ಮಠಗಳ ಅಭಿವೃದ್ಧಿಗಾಗಿ ಬಿಡುಗಡೆ ಮಾಡಲಾದ ಅನುದಾನವೆಷ್ಟು? (ವಿವರಗಳನ್ನು ಜಿಲ್ಲಾವಾರು ನೀಡುವುದು)